ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 jsscwk@gmail.com www. jsscwkgl.org

## ಪ್ರಕಟಣೆ ಕೃಪೆಗಾಗಿ

ದಿನಾಂಕ:15.08.2026ರ ಶನಿವಾರದಂದು ನಮ್ಮ ಕಾಲೇಜಿನಲ್ಲಿ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸಂಭ್ರಮ ಮತ್ತು ದೇಶಭಕ್ತಿಯ ಮನೋಭಾವದಿಂದ ಆಚರಿಸಲಾಯಿತು, ಕಾರ್ಯಕ್ರಮವು ರಾಷ್ಟ್ರಧ್ವಜಾರೋಹಣ ಮಾಡುವುದರೊಂದಿಗೆ ಪ್ರಾರಂಭವಾಯಿತು ನಂತರ ರಾಷ್ಟ್ರಗೀತೆಯನ್ನು ಹಾಡಲಾಯಿತು.

ಈ ಕಾರ್ಯಕ್ರಮದಲ್ಲಿ ಧ್ವಜಾರೋಹಣ ಮಾಡಿದ ಸಂಸ್ಕೃತಿಚಿಂತಕ ಮತ್ತು ನಿವೃತ್ತ ಶಿಕ್ಷಕರಾದ ಶಿವಣ್ಣ ಇಂದ್ವಾಡಿರವರು ಮಾತನಾಡಿ ಸ್ವಾತಂತ್ರ್ಯ ದಿನಾಚರಣೆಯ ಮಹತ್ವವನ್ನು, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹಾತ್ಮರ ತ್ಯಾಗ, ಬಲಿದಾನವನ್ನು ಹಾಡಿನ ಮೂಲಕ ಸ್ಮರಿಸಿದರು. ಈ ಸ್ವಾತಂತ್ರ್ಯ ದಿನಾಚರಣೆಯು ಸಂಭ್ರಮದ ಸುದಿನ. ನಮ್ಮ ದೇಶದ ಬಗ್ಗೆ ಇರುವ ಜವಾಬ್ದಾರಿಯನ್ನು, ಗೌವರವನ್ನು ನೆನಪಿಸುವಂತಹ ದಿನವಾಗಿದೆ ಹಾಗೇಯೇ ನಮ್ಮ ದೇಶದ ಕಾನೂನುಗಳನ್ನು ಪಾಲಿಸಬೇಕು, ಪರಿಸರವನ್ನು ಸ್ವಚ್ಛವಾಗಿಡಬೇಕು ಇತರರಿಗೆ ಸಹಾಯ ಮಾಡುವುದರ ಜೊತೆಗೆ ದೇಶಾಭಿಮಾನವನ್ನು ಬೆಳಸಿಕೊಂಡು ಸದೃಢ ರಾಷ್ಟ್ರನಿರ್ಮಾಣ ಮಾಡಲು ಶ್ರಮಿಸಬೇಕೇಂದು ಸ್ವಾತಂತ್ರ್ಯ ದಿನಾಚರಣೆಯ ಸಂದೇಶವನ್ನು ನೀಡಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜೆಎಸ್‌ಎಸ್ ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ಡಾ ಹೆಚ್ ಎಸ್ ಕೊಂಗಳಪ್ಪರವರು ವಹಿಸಿದರು, ಜೆಎಸ್‌ಎಸ್ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಎನ್ ಮಹಾದೇವಸ್ವಾಮಿ, ಸ್ಕೂಲ್ ಆಫ್ ನರ್ಸಿಂಗ್ ಪ್ರಾಂಶುಪಾಲರಾದ ಹೇಮೇಶ್ ಮೂರ್ತಿ, ರಾಷ್ಟ್ರೀಯ ಹಬ್ಬದ ಸಂಚಾಲಕರಾದ ಕೆ.ಆರ್ ಗುರುಪ್ರಸಾದ್‌ರವರು, ದೈಹಿಕ ನಿರ್ದೇಶಕರಾದ ಶ್ರೀಧರ್ ಎಸ್ ರವರು, ಅಧ್ಯಾಪಕರು, ಅಧ್ಯಾಪಕೇತರರು, ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮವು ವಂದನಾರ್ಪಣೆಯೊಂದಿಗೆ ಮುಕ್ತಾಯವಾಯಿತು.




೭೦ ಸ್ವಾತಂತ್ರ್ಯ ದಿನಾಚರಣೆ  ಕಾರ್ಯಕ್ರಮದಲ್ಲಿ ಸಂಸ್ಕೃತಿಚಿಂತಕ ಮತ್ತು ನಿವೃತ್ತ ಶಿಕ್ಷಕರಾದ ಶಿವಣ್ಣ ಇಂದ್ವಾಡಿ ಪ್ರಾರ್ಚಾಯರಾದ ಡಾ.ಹೆಚ್ ಎಸ್ ಕೊಂಗಳಪ್ಪರವರು, ಜೆಎಸ್ಎಸ್ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಎನ್ ಮಹದೇವಸ್ವಾಮಿ, ಸ್ಕೂಲ್ ಆಫ್ ನರ್ಸಿಂಗ್ ಶಾಲೆಯ ಪ್ರಾಂಶುಪಾಲರಾದ ಶ್ರೀ ಹೇಮಶ್ಮೂರ್ತಿ,  ಹಾಗೂ ಅಧ್ಯಾಪಕರು ಮತ್ತು ವಿದ್ಯಾರ್ಥಿಯರನ್ನು ಕಾಣಬಹುದು. ಕಾಣಬಹುದು.

